# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 524( 539)
ಸದಸ್ಯರ ಹೆಸರು : ಡಾ|| ಉಮಾಶ್ರೀ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು
ಉತ್ತರಿಸುವ ದಿನಾಂಕ : 14.08.2025

| ಪ್ರಶ್ನೆ | ಉತ್ತರ |
|---|---|
| ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸರ್ಕಾರಿ ನೌಕರರಿಗೆ ಜೇಷ್ಠತೆ ಸಂರಕ್ಷಣಾ ಕಾಯ್ದೆ ಜಾರಿಯಲ್ಲಿದ್ದರೂ ರೋಸ್ಟರ್ ಪದ್ಧತಿ ಪ್ರಕಾರ ಮುಂಬಡ್ತಿ ಸಿಗದೆ ನೌಕರರು ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಇಲ್ಲ |
| ಆ) ಈ ರೀತಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸರ್ಕಾರಿ ನೌಕರರಿಗೆ ಮುಂಬಡ್ತಿಯಿಂದ ವಂಚಿತರಾಗಲು ಕಾರಣವೇನು: ಎಷ್ಟು ಜನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸರ್ಕಾರಿ ನೌಕರರು ಮುಂಬಡ್ತಿಯಿಂದ ವಂಚಿತರಾಗಿದ್ದಾರೆ; | ಶ್ರೀ ಬಿ.ಕೆ. ಪವಿತ್ರ ಪ್ರಕರಣದ ಹಿನ್ನೆಲೆಯಲ್ಲಿ ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ, 2017ನ್ನು ಜಾರಿ ಮಾಡಲಾಗಿರುತ್ತದೆ.<br><br>ಅಧಿನಿಯಮವು ಜಾರಿಯಾದ ಹಿನ್ನೆಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರ ಜೇಷ್ಠತೆಯನ್ನು ಸಂರಕ್ಷಿಸುವ ನಿಟ್ಟಿನಲ್ಲಿ ದಿನಾಂಕ: 27.02.2019ರ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 186 ಎಸ್‌ಆರ್‌ಎಸ್ 2018ರಲ್ಲಿ ಈ ಕೆಳಕಂಡಂತೆ ತಿಳಿಸಲಾಗಿರುತ್ತದೆ. |

| | |
|---|---|
| | |
| | 8. in the circumstances explained in the preamble, the following instructions are hereby issued subject to the conditions that the officers/ officials, who have been reverted, shall be reposted to the cadres held by them immediately prior to their reversion and if vacant posts are not available in those cadres, supernumerary posts shall be created to accommodate them. It is also ordered that the officers/ officials working at present in those cadres, belonging to any category, shall not be reverted:<br><br>ಈ ರೀತಿ ಕೈಗೊಂಡ ಕ್ರಮದ ಬಗ್ಗೆ ಅನುಪಾಲನಾ ವರದಿಯನ್ನು ಸಹ ನೀಡುವಂತೆ ಸೂಚಿಸಿದ್ದ ಹಿನ್ನೆಲೆಯಲ್ಲಿ ಎಲ್ಲಾ ಇಲಾಖಾ ಮುಖ್ಯಸ್ಥರು ಮೇಲ್ಕಂಡ ಸೂಚನೆಯಂತೆ ಕ್ರಮ ಕೈಗೊಂಡಿರುತ್ತಾರೆ. |
| ಇ) ಯಾವ ಯಾವ ಇಲಾಖೆಗಳಲ್ಲಿ ಮುಂಬಡ್ತಿ ನೀಡಿರುವುದಿಲ್ಲ; (ಇಲಾಖಾವಾರು ಮಾಹಿತಿ ನೀಡುವುದು) ಬಡ್ತಿ ಮೀಸಲಾತಿ ಆದೇಶ ಪಾಲನೆಯಾಗದಂತೆ ಸುತ್ತೋಲೆಗಳನ್ನು ಹೊರಡಿಸಲಾಗಿದೆಯೇ; ಯಾವ ವರ್ಷದಲ್ಲಿ ಆದೇಶ ಹೊರಡಿಸಲಾಗಿದೆ? | ಯಾವುದೇ ಇಲಾಖೆಯು ದಿನಾಂಕ: 27.02.2019ರ ಸರ್ಕಾರಿ ಆದೇಶದನ್ವಯ ಕ್ರಮ ಕೈಗೊಳ್ಳದೇ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ಬಡ್ತಿ ಮೀಸಲಾತಿ ಆದೇಶವನ್ನು ಪಾಲನೆ ಮಾಡದಂತೆ ಸರ್ಕಾರದಿಂದ ಯಾವುದೇ ಸುತ್ತೋಲೆಯನ್ನು ಹೊರಡಿಸಿರುವುದಿಲ್ಲ. |

**ಸಂಖ್ಯೆ: ಸಿಆಸುಇ 234 ಸೇನೆನಿ 2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ